# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ವಿವಿಧ ತಾಲ್ಲೂಕು ಪಂಚಾಯತಿಗಳ ಮತ್ತು ಅವುಗಳ ವ್ಯಾಪ್ತಿಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮತ್ತು ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿ/ಸಿಬ್ಬಂದಿಯವರ ಬಾಕಿ/ಪ್ರಸಕ್ತ ಸಾಲಿನ/ಬಾಕಿ ವೇತನ ಮತ್ತು ಸಂಭಾವನೆಗಾಗಿ ಅನುದಾನವನ್ನು ಬಿಡುಗಡೆಗೊಳಿಸುವ ಬಗ್ಗೆ

**ಓದಲಾಗಿದೆ:**

1. ಸುತ್ತೋಲೆ ಸಂಖ್ಯೆ: ಆಇ 01 ಜಿಪಅ 2014 ದಿನಾಂಕ:1.2.2014
2. ಆರ್ಥಿಕ ಇಲಾಖೆ ವೆಚ್ಚ 3,ಶಾಖೆಯ ಕಡತ ಸಂಖ್ಯೆ: ಆಇ 405 ಮತ್ತು 514 ವೆಚ್ಚ 3/2021 ಹಾಗೂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ ಮುಖ್ಯ ಲೆಕ್ಕಾಧಿಕಾರಿಗಳ/ಕಾರ್ಯನಿರ್ವಾಹಕ ಅಧಿಕಾರಿಗಳ ಪತ್ರಗಳು

**ಪ್ರಸ್ತಾವನೆ:**

ವಿವಿಧ ತಾಲ್ಲೂಕು ಪಂಚಾಯತಿಗಳ ಹಾಗೂ ಅವುಗಳ ವ್ಯಾಪ್ತಿಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಸಮಾಜ ಕಲ್ಯಾಣ ಇಲಾಖೆ... ಖಾಲಿ ಇರುವ ಹುದ್ದೆಗಳು ಭರ್ತಿಯಾದ್ದರಿಂದ ಬಾಕಿ/ಪ್ರಸಕ್ತ ಸಾಲಿನ ವೇತನ ವೆಚ್ಚಕ್ಕಾಗಿ, ದಿನಗೂಲಿ ನೌಕರರ ವೇತನ ವೆಚ್ಚಕ್ಕಾಗಿ ಪ್ರಧಾನ ಲೆಕ್ಕಶೀರ್ಷಿಕೆ: 22... 2225 ಮತ್ತು 2515ರಡಿ ಒಟ್ಟು ರೂ.240.89ಲಕ್ಷಗಳನ್ನು ಹೆಚ್ಚುವರಿಯಾಗಿ ಬಿಡುಗಡೆಗೊಳಿಸಲು ಪ್ರಸ್ತಾವಿಸಿದೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಜಿಲ್ಲಾ ಪಂಚಾಯತ್ ಕಾರ್ಯಕ್ರಮದಡಿ ರೂ.240.89ಲಕ್ಷಗಳನ್ನು ಲೆಕ್ಕ ಶೀರ್ಷಿಕೆ 2515-00-197-1-10-3... ಬಿಡುಗಡೆಗೊಳಿಸಲು ನಿರ್ಣಯಿಸಿ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಆಇ 465 ವೆಚ್ಚ 6/2021(ಇ) ದಿನಾಂಕ: 23ನೇ ಸೆಪ್ಟೆಂಬರ್ 2021

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಈ ಆದೇಶಕ್ಕೆ ಲಗತ್ತಿಸಿರುವ ಅನುಬಂಧದ ಕಾಲಂ 2ರ ತಾಲ್ಲೂಕು ಪಂಚಾಯತಿಗೆ ಕಾಲಂ 3 ಕಾರ್ಯಕ್ರಮದಡಿ ಬಾಕಿ/ ಪ್ರಸಕ್ತ ಸಾಲಿನ ವೇತನ ಪಾವತಿಗಾಗಿ ಅಗತ್ಯವಿರುವ ಅನುದಾನವನ್ನು ಕಾಲಂ 4ರ ಲೆಕ್ಕ ಶೀರ್ಷಿಕೆಯಡಿ ರೂ.240.89ಲಕ್ಷ (ರೂಪಾಯಿ ಎರಡು ನೂರ ನಲವತ್ತು ಲಕ್ಷದ ಎಂಬತ್ತೊಂದು ಸಾವಿರಗಳು ಮಾತ್ರ) ಗಳನ್ನು ಬಿಡುಗಡೆಗೊಳಿಸಿದೆ.

(ಸೂಚನೆ: ಬಿಡುಗಡೆಗೊಳಿಸಿರುವ ಅನುದಾನವನ್ನು ನಿಧಿ-2ಕ್ಕೆ ಜಮೆ ಮಾಡಿಕೊಂಡು, ನಂತರ ಸಂಬಂಧಪಟ್ಟ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು ಮರು ಹೊಂದಾಣಿಕೆ ಆದೇಶವನ್ನು ಈ ಕೆಳಗಿನ ಅಧಿಕಾರಿಗಳಿಗೆ ಸುತ್ತೋಲೆರನ್ವಯ ಪ್ರಸ್ತಾವನೆ ಆರ್ಥಿಕ ಇಲಾಖೆ ಸಲ್ಲಿ... ಖಜಾನೆಯಲ್ಲಿ ಅಪ್ ಲೋಡ್ ಮಾಡಿಕೊಳ್ಳುವುದು.

ಬಿಡುಗಡೆಗೊಳಿಸಿದ ಈ ಅನುದಾನವನ್ನು ಪ್ರಸ್ತಾವಿತ ವೆಚ್ಚವನ್ನು ಆದ್ಯತೆಯ ಮೇಲೆ ವೆಚ್ಚ ಮಾಡತಕ್ಕದ್ದು, ಯಾವುದೇ ಹಂತದಲ್ಲಿ ಅಂದರೆ ಮುಖ್ಯ ಲೆಕ್ಕಾಧಿಕಾರಿಳು/ಅನುಷ್ಠಾನಾಧಿಕಾರಿಗಳ ಹಂತದಲ್ಲಿ ವಿಳಂಬವಾಗಿ ಅನುದಾನ ವ್ಯಪಗತವಾದಲ್ಲಿ ಮತ್ತೊಮ್ಮೆ ಅನುದಾನವನ್ನು ಒದಗಿಸುವುದಿಲ್ಲವೆಂದು ಮತ್ತು ವಿಳಂಬಗೊಳಿಸಿದ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಕ್ರಮವಹಿಸಲಾಗುವುದು. **ಪ್ರಸ್ತಾವಿತ ಲೆಕ್ಕ ಶೀರ್ಷಿಕೆಯಡಿ ಬಾಕಿ ವೇತನವನ್ನು ಸೆಳೆಯಬೇಕಾಗಿದ್ದಲ್ಲಿ ಅದಕ್ಕೆ ಆರ್ಥಿಕ ಇಲಾಖೆ ಹೊರಡಿಸಿರುವ ಸುತ್ತೋಲೆಯ ಷರತನ್ನು ಸಡಿಲಿಸಿ ಬಾಕಿ ವೇತನವನ್ನು ಸೆಳೆಯಲು ಸಹಮತಿಸಿದೆ ಎಂದು ಭಾವಿಸತಕ್ಕದ್ದು.**

| ಕ್ರ.ಸಂ. | ಜಿಲ್ಲಾ ಪಂಚಾಯತ್ | ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ | ಲೆಕ್ಕ ಶೀರ್ಷಿಕೆ 2515-00-196-1-05-300ರಡಿ ಬಿಡುಗಡೆಗೊಳಿಸಿದ ಅನುದಾನ (ರೂ.ಲಕ್ಷಗಳಲ್ಲಿ) |
|---|---|---|---|
| 1 | 2 | 3 | 4 |
| 1 | ಔರಾದ್ | 2225-00-101-0-61-005 | 5.73 |
| 2 | ಕಲಬುರ್ಗಿ | 2225-00-103-0-61-005 | 4.13 |
| 3 | ಸವದತ್ತಿ<br>ಬೈಲಹೊಂಗಲ<br>ಸಕಲೇಶಪುರ | 2210.00.104.0.61-005 | 11.60<br>5.77<br>8.35 |
| 4 | ಸಿಂಧಗಿ | 2515-00-102-0-61-005 | 55.35 |
| 5 | ಬಸವನಬಾಗೇವಾಡಿ | 225-00-103-0-74-005 | 7.99 |
| 6 | ಅರಕಲಗೂಡು | 2225-00-103-0-74-005 | 8.50 |
| 7 | ಯಳಂದೂರು | 2225-00-103-0-74-005 | 7.06 |
| 8 | ಹೊಳೆನರಸೀಪುರ | 2225-00-103-0-74-005 | 8.13 |
| 9 | ಗುಬ್ಬಿ<br>ಚಿಕ್ಕನಾಯಕನಹಳ್ಳಿ<br>ತಿಪಟೂರು | 2225-00-103-0-74-005 | 6.74<br>6.59<br>8.67 |
| 10 | ಚನ್ನರಾಯಪಟ್ಟಣ | 2210-00-104-0-61-005 | 36.00 |
| 11 | ಕುಷ್ಟಗಿ | 2515-00-102-0-63-251 | 3.95 |
| 12 | ಹಾನಗಲ್ | 2515-00-102-0-61-005 | 8.95 |
| 13 | ದೇವನಹಳ್ಳಿ | 2515-00-102-0-63-033 | 7.12 |
| 14 | ಮುಂಡರಗಿ<br>ಹುನಗುಂದ | 2210-00-104-0-61-005 | 11.13<br>7.31 |
| 15 | ಕಾಗವಾಡ | 2515-00-102-0-61-005' | 2.83 |
| 16 | ಚಿತ್ತಾಪುರ | 2225-00-103-0-74-005 | 5.86 |
| 17 | ಮೊಳಕಾಲ್ಮೂರು | 2515-00-102-0-63-034 | 10.82 |
| 18 | ಕಿತ್ತೂರು | 2515-00-102-0-61-005 | 2.31 |
| | ಒಟ್ಟು | | **240.89** |

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

(ಶ್ರೀಕೃಷ್ಣ ಎನ್. ಬುಗಟ್ಯಾಗೋಳ)
ವಿಶೇಷಾಧಿಕಾರಿ(ಜಿ.ಪಂ.) ಹಾಗೂ ಪದನಿಮಿತ್ತ
ಸರ್ಕಾರದ ಜಂಟಿ ಕಾರ್ಯದರ್ಶಿ
ಆರ್ಥಿಕ ಇಲಾಖೆ

1. ಮಹಾಲೇಖಪಾಲರು(ಎ&ಇ) ಲೆಕ್ಕ ಪರಿಶೋಧನೆ 1 & 2, ಕರ್ನಾಟಕ, ಬೆಂಗಳೂರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಜಾನೆ-2, 7ನೇ ಮಹಡಿ, ವಾಣಿಜ್ಯ ತೆರಿಗೆ ಕಟ್ಟಡ, ಗಾಂಧಿನಗರ, ಬೆಂಗಳೂರು-2ರವರಿಗೆ

3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಗ್ರಾ.ಅ.ಪ./ಆರೋಗ್ಯ ಮತ್ತು ಕುಟುಂಬ ಕಲ್ಯಾಣ/ಸಮಾಜ ಕಲ್ಯಾಣ ಇಲಾಖೆ
4. ಸಂಬಂಧಪಟ್ಟ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಮುಖ್ಯ ಲೆಕ್ಕಾಧಿಕಾರಿಗಳು,
5. ಜಂಟಿ ನಿರ್ದೇಶಕರು, ಖಜಾನೆ ಗಣಕಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ಬೆಂಗಳೂರು
6. ಸಂಬಂಧಿಸಿದ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು
7. ಸಂಬಂಧಪಟ್ಟ ಜಿಲ್ಲಾ/ಉಪ ಖಜಾನಾಧಿಕಾರಿಗಳು,
8. ರಕ್ಷಾ ಕಡತಕ್ಕೆ
9. ಹೆಚ್ಚುವರಿ ಪ್ರತಿ